# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:110 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 23-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com


# ಒಗ್ಗಟ್ಟಾಗಿ ಚುನಾವಣೆ ಮಾಡಿದರೆ ಗೆಲುವು ಖಚಿತ: ಸಿ.ಎಂ.ಸಿದ್ದರಾಮಯ್ಯ

## ಎಲ್ಲರೂ ಒಟ್ಟಾಗಿ ಅಖಾಡಕ್ಕೆ ಇಳಿದಿದ್ದೇವೆ. ಎರಡೂ ಕ್ಷೇತ್ರದಲ್ಲೂ ಗೆದ್ದು ಬಂದು ಈ ಗೆಲುವನ್ನು ನಿಮಗೆ ಅರ್ಪಿಸುತ್ತೇವೆ: ಸಿಎಂಗೆ ಭರವಸೆ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಂಗಳೂರು ಮಾ 22: ನಾವು ನಡೆಸಿರುವ ಎಲ್ಲಾ ಸಮೀಕ್ಷೆಗಳಲ್ಲೂ ಬೆಳಗಾವಿಯಲ್ಲಿ ಉತ್ತಮ ಪ್ರತಿಕ್ರಿಯೆ ಬಂದಿದೆ. ಒಗ್ಗಟ್ಟಾಗಿ ಚುನಾವಣೆ ಮಾಡಿ. ಉತ್ತರ ಕನ್ನಡ ಜಿಲ್ಲೆ ಸೇರಿ ಬೆಳಗಾವಿಯ ಜಿಲ್ಲೆಗಳಿಗೆ ಒಳಪಡುವ ಮೂರೂ ಲೋಕಸಭಾ ಕ್ಷೇತ್ರಗಳಲ್ಲೂ ಖಚಿತವಾಗಿ ಗೆಲುವು ಸಾಧಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಕಾವೇರಿಯಲ್ಲಿ ನಡೆದ ಬೆಳಗಾವಿ ಜಿಲ್ಲೆಯ ಸಚಿವರು, ಶಾಸಕರು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಮುಖಂಡರ ಸಭೆಯಲ್ಲಿ ಮುಖ್ಯಮಂತ್ರಿಗಳು ಬೆಳಗಾವಿಯ ಎರಡು ಲೋಕಸಭಾ ಕ್ಷೇತ್ರ ಹಾಗೂ ಬೆಳಗಾವಿ ಜಿಲ್ಲೆಯ ಎರಡು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರುವ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲೂ ಗೆಲುವು ಸಾಧಿಸಬಹುದಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಐದು ಗ್ಯಾರಂಟಿ ಯೋಜನೆಗಳು ಬೆಳಗಾವಿ ಜಿಲ್ಲೆಯ ಲಕ್ಷಾಂತರ ಕುಟುಂಬಗಳ ಮತ್ತು ಮಹಿಳೆಯರ ಬದುಕಿನ ಸಂಕಟವನ್ನು ಕಡಿಮೆ ಮಾಡಿವೆ. ಇದಕ್ಕಾಗಿ ಯುವತಿಯರು ಮತ್ತು ಮಹಿಳೆಯರು ಶೇ80 ರಷ್ಟು ನಮ್ಮ ಪರವಾಗಿ ಇದ್ದಾರೆ ಎನ್ನುವ ಸಕಾರಾತ್ಮಕ ವರದಿ ಸಮೀಕ್ಷೆಗಳಿಂದ ಹೊರ ಬಂದಿವೆ. ನಾವು ಜನರ ಮನೆ ಬಾಗಿಲಿಗೆ ಹೋಗಿ ಪ್ರತೀ (2 ನೇ ಪುಟಕ್ಕೆ)



# BJP ಗೆ ಪ್ರಜಾತಂತ್ರ ಮತ್ತು ಸಂವಿಧಾನದ ಮೇಲೆ ನಂಬಿಕೆ ಇಲ್ಲ :ಸಿದ್ದರಾಮಯ್ಯ

ಬೆಂಗಳೂರು ಮಾ 22: ಸೋಲಿನ ಭಯದಲ್ಲಿ ಕಾಂಗ್ರೆಸ್ ಬ್ಯಾಂಕ್ ಖಾತೆಗಳನ್ನು ಬಿಜೆಪಿ ಸೀಜ್ ಮಾಡಿದೆ. ಈ ಬಾರಿ ಬಿಜೆಪಿಯನ್ನು ದೇಶದ ಜನ ಸ್ಪಷ್ಟವಾಗಿ ತಿರಸ್ಕರಿಸಿ ಭಾರತವನ್ನು ಉಳಿಸುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಕೆಪಿಸಿಸಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.ಬ್ರಿಟೀಷರನ್ನು ಭಾರತದಿಂದ ಓಡಿಸಲು ಸುದೀರ್ಘ ಹೋರಾಟ ನಡೆಸಿ ಹುತಾತ್ಮರಾದ, ಜೈಲು ಸೇರಿದ ಚರಿತ್ರೆ ಇರುವ ಪಕ್ಷ ಕಾಂಗ್ರೆಸ್. ಬಿಜೆಪಿ ನಮಗೆ ಎಷ್ಟೇ ತೊಂದರೆ ಕೊಟ್ಟರೂ ಕಾಂಗ್ರೆಸ್ ಕಾರ್ಯಕರ್ತರು ಹೋರಾಟದ ಹಾದಿಯಲ್ಲೇ ಎಲ್ಲವನ್ನೂ ಎದುರಿಸಲಿದ್ದಾರೆ ಎಂದರು.

ಪ್ರಜಾಪ್ರಭುತ್ವದಲ್ಲಿ ಜನಾಭಿಪ್ರಾಯ ಅಂತಿಮ. ಕಾಂಗ್ರೆಸ್ ಜನರಿಂದ ಹಣ ಸಂಗ್ರಹಿಸಿದೆ. ಜನರು ಸ್ವಯಂಪ್ರೇರಿತವಾಗಿ (6ನೇ ಪುಟಕ್ಕೆ)

# ಲೋಕಸಭಾ ಚುನಾವಣೆ: ಸುಳ್ಳು ಮಾಹಿತಿ ಮುದ್ರಣ ನಿರ್ಬಂಧ

ಬೆಳಗಾವಿ,ಮಾ.22 : ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಸಂಬಂಧ ಜಿಲ್ಲೆಯಲ್ಲಿ ಮಾದರಿ ಸಂಹಿತೆ ಜಾರಿಯಾಗಿರುವ ಹಿನ್ನೆಲೆಯಲ್ಲಿ ದ್ವೇಷ ಭಾವನೆ ಕೆರಳಿಸುವಂತಹ ಬ್ಯಾನರ್, ಸುಳ್ಳು ಮಾಹಿತಿಯನ್ನು ಮುದ್ರಿಸಬಾರದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚಿಸಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಯಾವುದೇ ರೀತಿಯ ಕೋಮುಗಲಭೆ ಸೃಷ್ಟಿಸುವಂತಹ, ದ್ವೇಷ ಭಾವನೆಗಳನ್ನು ಕೇರಳಿಸುವಂತ ಬ್ಯಾನರ್, ಹೋಲ್ಡಿಂಗ್ಸಗಳಾಗಲಿ ಅಥವಾ ಕರಪತ್ರಗಳನ್ನಾಗಲಿ ಮುದ್ರಿಸುವಂತಿಲ್ಲ ಮುದ್ರಿಸಲಾದ ಅಥವಾ ಬಹುಗ್ರಾಫ್ ಮಾಡಲಾದ ಪ್ರತಿಯೊಂದು ಚುನಾವಣಾ ಕರಪತ್ರ, ಫಲಕ, ಭಿತ್ತಿಪತ್ರ, ಅಥವಾ ಫೋಸ್ಟರ್ ಮುಂಭಾಗದಲ್ಲಿ ಮುದ್ರಕನ ಹೆಸರು, ವಿಳಾಸ ಮತ್ತು ಪ್ರಕಾಶಕ ಹೆಸರು, ವಿಳಾಸವನ್ನು ಕಡ್ಡಾಯವಾಗಿ ಹೊಂದಿರಬೇಕು. ಅಂತಹ ಯಾವುದೇ ಡಾಕ್ಯುಮೆಂಟ್‌ನ ಮುಂದ್ರಣವು ಉದ್ದೇಶಿತ ಪ್ರಕಾಶಕರಿಂದ ಸಹಿ ಮಾಡಲ್ಪಟ್ಟ ಮತ್ತು ಅವನು ವ್ಯಕ್ತಿವಾಗಿ ತಿಳಿದಿರುವ ಇಬ್ಬರು ವ್ಯಕ್ತಿಗಳಿಂದ ದೃಢೀಕರಿಸಲ್ಪಟ್ಟ ಅವನ ಗುರುತಿನ ಘೋಷಣೆಯನ್ನು ದ್ವಿ-ಪ್ರತಿಯಲ್ಲಿ ಪಡೆಯಬೇಕು. ಯಾವುದೇ ನಬಂಧನೆಗಳನ್ನು ಉಲ್ಲಂಘಿಸಿದರೆ ಐಪಿಸಿ ಸೆಕ್ಷನ್ 188 ಅಡಿ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾ ಗುವುದು ಎಂದು ಬೆಳಗಾವಿ ಜಿಲ್ಲಾ ಚುನಾ ವಣಾ ಧಿಕಾರಿಗಳಾದ ನಿತೇಶ್ ಪಾಟೀಲ ಅವರು ಸೂಚಿಸಿದ್ದಾರೆ.

## ಲೋಕಸಭೆ ಚುನಾವಣೆ: ಮೊದಲ ಹಂತದ ಇವಿಎಂ ಯಾರ್ಂಡಮೈಜೇಳನ್

# ಮತಕ್ಷೇತ್ರವಾರು ಇವಿಎಂ ಹಂಚಿಕೆ ಪ್ರಕ್ರಿಯೆ ಪೂರ್ಣ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ,ಮಾ.22 : ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ಮಾರ್ಗಸೂಚಿ ಅನ್ವಯ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಇವಿಎಂ ಮತಯಂತ್ರಗಳ ಮೊದಲ ಹಂತದ ಯಾದೃಚ್ಛೀಕರಣ (ಯಾರ್ಂಡಮೈಜೇಳನ್) ಪ್ರಕ್ರಿಯೆ ನಡೆಸಲಾಯಿತು.ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಮಾ.22) ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜೊತೆಗೆ ಯಾರ್ಂಡಮೈಜೇಳನ್ ನಡೆಸಲಾಯಿತು. ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಯಾರ್ಂಡಮೈಜೇಳನ್ ಪ್ರಕ್ರಿಯೆ ಮೂಲಕ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ವಿಧಾನಸಭಾ ಮತಕ್ಷೇತ್ರವಾರು ಹಂಚಿಕೆ ಮಾಡಲಾಗುವುದು. ಹೀಗೆ ಅಂತಿಮಗೊಳಿಸಲಾದ ಮತಯಂತ್ರಗಳ( ಇವಿಎಂ) ಪಟ್ಟಿಯನ್ನು ಸಹಾಯಕ ಚುನಾವಣಾಧಿಕಾರಿಗಳು ಮತ್ತು ತಹಶೀಲ್ದಾರುಗಳಿಗೆ ಕಳುಹಿಸಿಕೊಡಲಾಗುವುದು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ್ ಶಿಂಧೆ, ವಿವಿಧ ಪಕ್ಷಗಳ ಪ್ರತಿನಿಧಿಗಳು ಸೇರಿದಂತೆ ಮತ್ತಿತರು ಹಾಜರಿದ್ದರು.



**5874 ಬಿಯು, ಕಂಟ್ರೋಲ್ ಯುನಿಟ್ ಹಂಚಿಕೆ:**ಇವಿಎಂ ಮತಯಂತ್ರಗಳ ಮೊದಲ ಹಂತದ ಯಾರ್ಂಡಮೈಜೇಳನ್ ಪ್ರಕ್ರಿಯೆ ಮೂಲಕ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಲಭ್ಯವಿರುವ ಮತಯಂತ್ರಗಳನ್ನು ಶೇ.130ರ ಪ್ರಮಾಣದಲ್ಲಿ 5874 ಬ್ಯಾಲೆಟ್ ಯುನಿಟ್; 5874 ಕಂಟ್ರೋಲ್ ಯುನಿಟ್‌ಮತ್ತು 5874 ವಿವಿಪ್ಯಾಟ್ ಯಂತ್ರಗಳನ್ನು ಹಂಚಿಕೆ ಮಾಡಲಾಯಿತು.ವಿಧಾನಸಭಾ ಕ್ಷೇತ್ರವಾರು ಹಂಚಿಕೆಯಾಗಿರುವ ಮತಯಂತ್ರಗಳನ್ನು ಮುಂದಿನ ಹಂತದ ಯಾರ್ಂಡಮೈಜೇಳನ್ ಸಂದರ್ಭದಲ್ಲಿ ಮತಗಟ್ಟೆವಾರು ಹಂಚಿಕೆ ಮಾಡಲಾಗುತ್ತದೆ.

# ಕಾಂಗ್ರೆಸ್ ನಾಯಕರು ಬೇರೆಯವರಿಗೆ ಚಾಕೊಲೇಟ್, ನೀವು ಬಿರಿಯಾನಿ ತಿನ್ನುವುದು ಆಗಬಾರದು : ಮಾಜಿ ಶಾಸಕ ರಮೇಶ್ ಕುಡಚಿ

ಬೆಳಗಾವಿ : ಕೆಲ ತಿಂಗಳ ಹಿಂದೆ ಬೆಳಗಾವಿಯಲ್ಲಿ ನಡೆದ ಕುರುಬ ಸಮಾವೇಶದಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಿಂದ ಕುರುಬ ಸಮಾಜಕ್ಕೆ ಕಾಂಗ್ರೆಸ್ ಟಿಕೆಟ್ ನೀಡುವುದಾಗಿ ಹೇಳಿ ಇಲ್ಲಿನ ಆಕಾಂಕ್ಷಿಯಾಗಿದ್ದ ಲಕ್ಷ್ಮಣರಾವ್ ಚಿಂಗಳೆ ಅವರಿಗೆ ಬುಡಾ ಅಧ್ಯಕ್ಷರನ್ನಾಗಿ ಮಾಡಿ ಮುಗಿಗೆ ತುಪ್ಪ ಸವರುವ ಕೆಲಸ ಕಾಂಗ್ರೆಸ್ ಮಾಡಿದೆ ಎಂದು ಮಾಜಿ ಶಾಸಕ ರಮೇಶ ಕುಡಚಿ ಅಸಮಾಧಾನ ವ್ಯಕ್ತಪಡಿಸಿದರು.



ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕುರುಬ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಂದೆಯೇ ಚಿಕ್ಕೋಡಿಗೆ ಕುರುಬ ಸಮಾಜಕ್ಕೆ ಹಾಗೂ ಬೆಳಗಾವಿಗೆ ಲಿಂಗಾಯತ ಸಮಾಜಕ್ಕೆ ಟಿಕೆಟ್ ನೀಡುವುದಾಗಿ ಹೇಳಿ ಲಕ್ಷ್ಮಣ ರಾವ್ ಚಿಂಗಳೆಗೆ ಬುಡಾ ಹಾಗೂ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದ ವಿನಯ ನಾವಲಗಟ್ಟಿಗೆ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷರಾಗಿ ಮಾಡಿ ಮೂಗಿಗೆ ತುಪ್ಪ ಸವರಿದ್ದಾರೆ.ಒಬ್ಬರಿಗೆ ಚಾಕೊಲೇಟ್ ಕೊಟ್ಟು ಇನ್ನೊಬ್ಬರಿಗೆ ಬಿರಿಯಾನಿ ತಿನ್ನುಸುವುದು ಆಗಬಾರದೆಂದು ಆಕ್ರೋಶ ವ್ಯಕ್ತಪಡಿಸಿದರು.

ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಗಳು ಪ್ರಚಂಡ ಬಹುಮತದಿಂದ ಗೆಲುವು ಸಾಧಿಸಲಿದ್ದಾರೆ ಎಂದರು. ಕಾಂಗ್ರೆಸ್ ಸಲುವಾಗಿ ದುಡಿದ ಕಾರ್ಯಕರ್ತರು ಸಾಕಷ್ಟು ಜನ ಇದ್ದಾರೆ. ಎಲ್ಲ ಸಮುದಾಯದವರನ್ನು ತೆಗೆದುಕೊಂಡ ಬಲಿಷ್ಠ ಕಾಂಗ್ರೆಸ್ ಪಕ್ಷ ಕಟ್ಟುವಲ್ಲಿ ಯಶಸ್ವಿಯಾಗಿದ್ದೇವೆ. ಈ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ಬೃಹತ್ ಕಾಂಗ್ರೆಸ್ ಭವನ ನಿರ್ಮಾಣ ಮಾಡಿ ಕಾರ್ಯಕರ್ತರ ಜೊತೆಗೆ ಸಮಾಲೋಚನೆ ಮಾಡಲು ಅವಕಾಶ ಇದೆ. ಈ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕು ಎಂದರು.

# ದಾನಿಗಳಿಂದ ಕಾಂಗ್ರೆಸ್‌ಗೆ 1,351 ಕೋಟಿ ದೇಣಿಗೆ

ಮುಂಬೈ, ಮಾ.22– ಚುನಾವಣಾ ಬಾಂಡ್‌ಗಳ ಮೂಲಕ ಸುಮಾರು 350 ದಾನಿಗಳಿಂದ ಕಾಂಗ್ರೆಸ್ 1,351 ಕೋಟಿ ರೂಪಾಯಿಗಳನ್ನು ಪಡೆದಿದೆ ಎಂದು ಎಸ್‌ಬಿಐ ಚುನಾವಣಾ ಆಯೋಗಕ್ಕೆ ಸಲ್ಲಿಸಿದ ಮಾಹಿತಿಯಲ್ಲಿ ಈ ವಿಷಯ ಹಂಚಿಕೊಂಡಿದೆ.

ವೆಸ್ಟರ್ನ್ ಯುಪಿ ಪವರ್ ಟ್ರಾನ್ಸ್‌ಮಿಷನ್, ವೇದಾಂತ ಮತ್ತು ಎಂಕೆ 3 ಗ್ರೂಪ್ ಅವರು ಕಾಂಗ್ರೆಸ್‌ಗೆ ತಲಾ 100 ಕೋಟಿ ರೂಪಾಯಿಗಿಂತ ಹೆಚ್ಚು ದೇಣಿಗೆ ನೀಡಿದ್ದರೆ, ಇನ್ನೂ 25 ಜನರು ಎರಡಂಕಿಯ ಕೋಟಿ ರೂಪಾಯಿಗಳಲ್ಲಿ ದೇಣಿಗೆ ನೀಡಿದ್ದಾರೆ ಎಂದು ಅಂಕಿ ಅಂಶಗಳು ತಿಳಿಸಿವೆ.

ವೆಸ್ಟರ್ನ್ ಯುಪಿ ಪವರ್ ಟ್ರಾನ್ಸ್‌ಮಿಷನ್ 110 ಕೋಟಿ ರೂಪಾಯಿಗಳನ್ನು ದೇಣಿಗೆ ನೀಡಿದ್ದರೆ, ಅದರ ಸಹೋದರ ಸಂಸ್ಥೆ ಕಾಳಜಿ ಮೇಘಾ ಎಂಜಿನಿಯರಿಂಗ್, ಅತಿದೊಡ್ಡ ಚುನಾವಣಾ ಬಾಂಡ್ ದಾನಗಳಲ್ಲಿ ಒಂದಾಗಿದ್ದು, ಕಾಂಗ್ರೆಸ್‌ಗೆ ಇನ್ನೂ 18 ಕೋಟಿ ರೂಪಾಯಿಗಳನ್ನು ಪಾವತಿಸಿದ್ದಾರೆ.

ಗಣಿಗಾರಿಕೆ ಮತ್ತು ಖನಿಜಗಳ ಮೇಜರ್ ವೇದಾಂತ 125 ಕೋಟಿ ರೂಪಾಯಿ ಪಾವತಿಸಿದೆ ಎಂದು ಅಂಕಿಅಂಶಗಳು ತೋರಿಸಿವೆ.ಕೋಲ್ಕತ್ತಾ ಮೂಲದ ಎಂಕೆಜೆ ಗ್ರೂಪ್, ಪೂರ್ವ ಭಾರತದಲ್ಲಿ 'ಕೆವೆಂಟರ್' ಬ್ರಾಂಡ್ ಹೆಸರಿನಲ್ಲಿ ಅತಿದೊಡ್ಡ ಎಫ್‌ಎಂಸಿಜಿ ಸರಪಳಿಗಳಲ್ಲಿ ಒಂದಾದ ಕಂಪನಿ ಕಾಂಗ್ರೆಸ್ ಪಕ್ಷದ ಹೆಸರಲ್ಲಿ ಸುಮಾರು 120 ಕೋಟಿ ರೂಪಾಯಿ ಮೌಲ್ಯದ ಚುನಾವಣಾ ಬಾಂಡ್ ಖರೀದಿ ಮಾಡಿದೆ.

ಫ್ಯೂಚರ್ ಗೇಮಿಂಗ್ ಅಂಡ್ ಹೋಟೆಲ್ ಸರ್ವಿಸಸ್, ಪ್ರಮುಖ ಲಾಟರಿ ಆಪರೇಟರ್, ಅತಿದೊಡ್ಡ ಬಾಂಡ್ ಖರೀದಿದಾರರಾಗಿ ಹೊರಹೊಮ್ಮಿದೆ, ಪಕ್ಷಕ್ಕೆ 50 ಕೋಟಿ ರೂಪಾಯಿ ಮೊತ್ತದ ಬಾಂಡ್ ಪಡೆದಿದೆ,

ಹೈದರಾಬಾದ್ ಮೂಲದ ಯಶೋದಾ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯು 64 ಕೋಟಿ ರೂಪಾಯಿಗಳನ್ನು ಪಾವತಿಸಿದೆ, ಕೋಲ್ಕತ್ತಾ ಮೂಲದ ಮತ್ತೊಂದು ಗುಂಪಿಗೆ ಸೇರಿದ ಎವೀಸ್ ಟ್ರೇಡಿಂಗ್ ಫೈನಾನ್ಸ್ 53 ಕೋಟಿ ರೂಪಾಯಿಗಳನ್ನು ಪಾವತಿಸಿದ್ದರೆ, ಕೋಲ್ಕತ್ತಾ ಮೂಲದ ಸಾಸ್ಮಲ್ ಇನ್‌ಫ್ರಾಸ್ಟ್ರಕ್ಚರ್ ಪಾವತಿಸಿದ್ದಾರೆ. 39 ಕೋಟಿ ರೂ.ಕೋಲ್ಕತ್ತಾದ ಪ್ರಮುಖ ಉದ್ಯಮಿಗಳಲ್ಲಿ ಒಬ್ಬರಾದ ಸಂಜೀವ್ ಗೋಯೆಂಕಾ ಅವರು ತಮ್ಮ ಕಂಪನಿ ಹಲ್ದಿಯಾ ಎನರ್ಜಿ ಮೂಲಕ 15 ಕೋಟಿ ರೂಪಾಯಿ ಮೌಲ್ಯದ ಬಾಂಡ್ ಖರೀದಿ ಮಾಡಿದೆ.

ಗುಜರಾತ್ ಪ್ರಧಾನ ಕಚೇರಿಯ ನಿರ್ಮಾ ಗ್ರೂಪ್ ನಿರ್ಮಾ ಮತ್ತು ನುವೊಕೊ ವಿಸ್ಟಾಸ್ ಮೂಲಕ ಕಾಂಗ್ರೆಸ್‌ಗೆ 17 ಕೋಟಿ ರೂ. ಬಿಕೆಸಿ ಪ್ರಾಪರ್ಟೀಸ್ ಮತ್ತು ಜಿಂದಾಲ್ ಸ್ಟೀಲ್ ಮತ್ತು ಪವರ್ ತಲಾ 20 ಕೋಟಿ ರೂಪಾಯಿ ಗುಜರಾತ್ ಮೂಲದ ಮತ್ತೊಂದು ಉದ್ಯಮ ಸಂಸ್ಥೆಯಾದ ಟೊರೆಂಟ್ ಪವರ್ 17 ಕೋಟಿ ರೂ., ಹೈದರಾಬಾದ್ ಮೂಲದ ಫಾರ್ಮಾ ಮೇಜರ್ ಡಾ. ರೆಡ್ಡೀಸ್ ಲ್ಯಾಬ್ 15 ಕೋಟಿ ರೂ. ದಕ್ಷಿಣ ಮೂಲದ ಮತ್ತೊಂದು ಫಾರ್ಮಾ ಮೇಜರ್ ದಿವಿಸ್ ಲ್ಯಾಬ್ಸ್ 5 ಕೋಟಿ ರೂಪಾಯಿ ಮೊತ್ತದ ಬಾಂಡ್ ಖರೀದಿಸಿವೆ.

ಟೆಲಿಕಾಂ ಪ್ರಮುಖ ಭಾರ್ತಿ ಗ್ರೂಪ್‌ಗೆ ಸೇರಿದ ಭಾರ್ತಿ ಇನ್‌ಫ್ರಾಟೆಲ್ 8 ಕೋಟಿ ರೂ., ಐಎಫ್‌ಬಿ ಆಗ್ರೋ ಮತ್ತು ಇಂಟರ್‌ಗ್ಲೋಬ್ ಏವಿಯೇಷನ್ ತಲಾ 5 ಕೋಟಿ ರೂ.ಗಳನ್ನು ಕಾಂಗ್ರೆಸ್‌ಗೆ ಚುನಾವಣಾ ಬಾಂಡ್ ಮೂಲಕ ಪಾವತಿಸಿವೆ ಎಂದು ಮಾಹಿತಿಯಲ್ಲಿ ತಿಳಿಸಿವೆ.

# ಬೆಳಗಾವಿ ಸಂಪಾದಕರ ಸಭೆಯಲ್ಲಿ ರಾಜ್ಯ ಪದಾಧಿಕಾರಿಗಳ ಸನ್ಮಾನ

ಬೆಳಗಾವಿ ; ಬೆಳಗಾವಿ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಭೆ ಇಂದು ನಡೆಯಿತು.

ಬೆಳಗಾವಿಯ ಸನ್ಮಾನ ಡಿಲಕ್ಸ್ ಹೋಟೆಲಿನಲ್ಲಿ ನಡೆದ ಈ ಸಭೆಯಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಅಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ, ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ಚೆನ್ನಬಸವ ಅವರುಗಳನ್ನು ಬೆಳಗಾವಿ ಜಿಲ್ಲಾ ಘಟಕದ ವತಿಯಿಂದ ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಎ.ಸಿ. ತಿಪ್ಪೇಸ್ವಾಮಿ ಅವರು ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಮಸ್ಯೆಗಳ ಪರಿಹಾರಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತು ವಿವರಿಸಿದರು.

ಉಪಾಧ್ಯಕ್ಷರಾದ ಮಂಜುನಾಥ ಅಬ್ಬಿಗೇರಿ ಮಾತನಾಡಿ ಜಾಹಿರಾತು ನೀತಿ ಸೇರಿದಂತೆ ಇತರ ವಿಷಯಗಳ ಕುರಿತು ಮುಂದಿನ ದಿನಗಳಲ್ಲಿ ಕೈಗೊಳ್ಳುವ ಕ್ರಮಗಳ ಕುರಿತು ವಿವರಿಸಿದರು. ರಾಜ್ಯ ಪ್ರಧಾನ ಕಾರ್ಯದರ್ಶಿ ಚನ್ನಬಸವ ಬಾಗಲವಾಡ ಅವರು ಮಾತನಾಡಿ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಉಳಿವು ಮತ್ತು ಬೆಳವಣಿಗೆಗಾಗಿ ಒಗ್ಗಟ್ಟಿನಿಂದ ಪ್ರಯತ್ನಿಸಬೇಕಿದೆ ಎಂದರು.

ಹಿರಿಯ ಸಂಪಾದಕ ಎಸ್. ಬಿ. ಧಾರವಾಡಕರ್ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದರು.

ಸಂಪಾದಕರ ಸಂಘದ ಜಿಲ್ಲಾ ಅಧ್ಯಕ್ಷ ಮುರುಗೇಶ್ ಶಿವಪೂಜಿ ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿ ಕಳೆದ 35 ವರ್ಷಗಳಲ್ಲಿ ಸಂಘ ನಡೆದು ಬಂದ ದಾರಿಯನ್ನು ವಿವರಿಸಿದರು, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್ ಮುಚಳಂಬಿ ಅವರು ವಂದಿಸಿದರು.



ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ, ಬೆಂಗಳೂರು. ಈ ಸಂಘಕ್ಕೆ ಬೆಳಗಾವಿ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘವು ತನ್ನ ಸ್ವತಂತ್ರ ಅಸ್ತಿತ್ವವನ್ನು ಉಳಿಸಿಕೊಂಡು ಅಫಿಲಿಯೇಶನ್ ( ಸಂಲಗ್ನತೆ ಅಥವಾ ಸಂಯೋಜನೆ) ಹೊಂದುವ ಕುರಿತು ಇದೇ ಸಭೆಯಲ್ಲಿ ಸರ್ವಾನುಮತದ ನಿರ್ಣಯವನ್ನು ಕೈಗೊಳ್ಳಲಾಯಿತು.

ಅದಕ್ಕೆ ಸಭೆಯಲ್ಲಿ ಉಪಸ್ಥಿತರಿದ್ದ ರಾಜ್ಯ ಅಧ್ಯಕ್ಷರು, ರಾಜ್ಯ ಉಪಾಧ್ಯಕ್ಷರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ತಮ್ಮ ಒಪ್ಪಿಗೆಯನ್ನು ಸೂಚಿಸಿದರು.

ತದನಂತರ ಬೆಳಗಾವಿ ಜಿಲ್ಲೆಯಿಂದ ರಾಜ್ಯ ಪರಿಷತ್ತಿಗೆ ಸಂಪಾದಕರುಗಳಾದ ಮನೋಹರ್ ಕಾಲಕುಂದ್ರಿಕರ್, ಎ. ಬಿ ಧಾರವಾಡಕರ್ ಮತ್ತು ಎನ್ . ಪ್ರಶಾಂತ್ ರಾವ್ ಅವರುಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ರಾಜ್ಯ ಸಮಿತಿ ಸದಸ್ಯರುಗಳಾದ ಹಿರೋಜಿ ಮಾವರ್ಕರ್, ಶ್ರೀಮತಿ ಬಬಿತಾ ಪವಾರ್ , ಮಲ್ಲಿಕಾರ್ಜುನ್ ಹೆಗನಾಯಕ್ ಮತ್ತು ಗುರುರಾಜ ಕದಮ ಅಲ್ಲದೆ ದಿನಪತ್ರಿಕೆಗಳ ಸಂಪಾದಕರುಗಳಾದ ಶಿವರಾಯ ಏಳುಕೋಟಿ, ವಿಜಯ್ ಕುಮಾರ್ ಮುಚ್ಚಳಂಬಿ, ನಾನಪ್ಪ ಮಾವರ್ಕರ್, ಜಯಪ್ರಕಾಶ್ ಜೋಶಿ, ಮತೀನ ಧಾರವಾಡಕರ್, ರಾಜೇಂದ್ರ ಪವಾರ್ ಮತ್ತು ಚೆನ್ನಪ್ಪ ವಗ್ಗಣ್ಣವರ್ ಉಪಸ್ಥಿತರಿದ್ದು ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.